ಉತ್ತರಿಸುವ ಸಚಿವರು: ಡಾ॥ಜಿ.ಪರಮೇಶ್ವರ್(ಉನ್ನತ ಶಿಕ್ಷಣ ಸಚಿವರು)

ಪ್ರಶ್ನೆ

1) ರಾಜ್ಯದಲ್ಲಿ ಡಿಪ್ಲೋಮಾ ತರಗತಿಗಳನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳೆಷ್ಟು?

2) ಈ ಡಿಪ್ಲೋಮಾ ಪರೀಕ್ಷೆಗಳನ್ನು ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುತ್ತಿರುವುದು ನಿಜವಲ್ಲವೆ?

3) ರಾಜ್ಯದಲ್ಲಿ ತಾಂತ್ರಿಕ ವಿಶ್ವವಿದ್ಯಾನಿಲಯ ಅಸ್ತಿತ್ವಕ್ಕೆ ಬಂದಿರುವುದರಿಂದ ಎಲ್ಲಾ ಡಿಪ್ಲೋಮಾ ಸಂಸ್ಥೆಗಳನ್ನು ಈ ತಾಂತ್ರಿಕ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಉತ್ತರ

1) ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಕೆಳಕಂಡ ಪಾಲಿಟೆಕ್ನಿಕ್‌ಗಳು ಅಸ್ತಿತ್ವದಲ್ಲಿರುತ್ತವೆ.

ಅ) ಸರ್ಕಾರಿ - 38

ಆ) ಅನುದಾನಿತ - 38

ಇ) ಖಾಸಗಿ -106

-182

2) ಹೌದು

3) ಪಾಲಿಟೆಕ್ನಿಕ್‌ಗಳಲ್ಲಿ ನಡೆಸಲಾಗುವ ಕೋರ್ಸುಗಳು ಎಸ್‌ಎಸ್‌ಎಲ್‌ಸಿ ನಂತರದ 03 ವರ್ಷದ ಡಿಪ್ಲೋಮಾ ಕೋರ್ಸುಗಳಾಗಿದ್ದು, ಈ ಡಿಪ್ಲೋಮಾ ಕೋರ್ಸುಗಳು ತಾಂತ್ರಿಕ ಪದವಿ ನೀಡುವ ತಾಂತ್ರಿಕ ವಿಶ್ವವಿದ್ಯಾನಿಲಯದ ಸಂಯೋಜನೆಗೆ ಒಳಪಡುವುದಿಲ್ಲ ಪ್ರಯುಕ್ತ ಡಿಪ್ಲೋಮಾ ಸಂಸ್ಥೆಗಳನ್ನು ತಾಂತ್ರಿಕ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಟಿ.ಸಿ.ಎಚ್., ಸಿ.ಪಿ.ಎಡ್. ಬಿ.ಎಡ್. ಪದವೀಧರರಿಗೆ, ಉದ್ಯೋಗಾವಕಾಶ ಕಲ್ಪಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 259(728)

ಸದಸ್ಯರ ಹೆಸರು: ಶ್ರೀ ಕಟ್ಟಿಮನಿ ಮನೋಹರ ಶಿವಪುತ್ರ (ಚಿಕ್ಕೋಡಿ)

ಉತ್ತರಿಸುವ ಸಚಿವರು: ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು)

ಪ್ರಶ್ನೆ

1) ಈಗಾಗಲೇ ಟಿ.ಸಿ.ಹೆಚ್., ಸಿ.ಪಿ.ಎಡ್. ಮತ್ತು ಬಿ.ಎಡ್. ಮುಗಿಸಿ ವಯೋಮಿತಿ ಮೀರುತ್ತಿರುವ ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಉದ್ಯೋಗ ಒದಗಿಸುವುದು ಸರ್ಕಾರದ ಗಮನದಲ್ಲಿದೆಯೇ?

2) ಹಾಗಿದ್ದಲ್ಲಿ ಉದ್ಯೋಗ ಒದಗಿಸಲು ಸರ್ಕಾರದ ನೀತಿ ನಿಯಮವೇನು?

3) ಯಾವುದೇ ಕ್ರಮ ಜರುಗಿಸದಿದ್ದಲ್ಲಿ ಇವರ ಜೀವನೋಪಾಯಕ್ಕೆ ಪರ್ಯಾಯ ವ್ಯವಸ್ಥೆ ಏನಾದರೂ ಮಾಡಲಾಗಿರುವುದೇ?

ಉತ್ತರ

1, 2 ಮತ್ತು 3) ಇಲ್ಲ. ಆದರೆ ಖಾಲಿ ಇರುವ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿಮಾಡಲು ಕ್ರಮ ಜರುಗಿಸಲಾಗಿದೆ.

ಬೆಂಗಳೂರಿನ ವಿಕ್ಟೋರಿಯಾ ಮತ್ತು ಬೌರಿಂಗ್ ಆಸ್ಪತ್ರೆಗಳಿಗೆ ಒದಗಿಸಲಾದ ವೈದ್ಯಕೀಯ ಉಪಕರಣಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 260(139)

ಸದಸ್ಯರ ಹೆಸರು: ಶ್ರೀ ಕೆ ಎ ಸುಬ್ರಮಣ್ಯ ನಾಯ್ಡು(ಶಿವಾಜಿನಗರ)

ಉತ್ತರಿಸುವ ಸಚಿವರು: ಡಾ:ಜಿ.ಪರಮೇಶ್ವರ್(ಉನ್ನತ ಶಿಕ್ಷಣ ಹಾಗೂ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಪ್ರಶ್ನೆ

ಅ) ಬೆಂಗಳೂರಿನ ವಿಕ್ಟೋರಿಯಾ, ಬೌರಿಂಗ್ ಮತ್ತು ಲೇಡಿಕರ್ಜನ್ ಆಸ್ಪತ್ರೆಗಳಲ್ಲಿ ಏಪ್ರಿಲ್ 1 2001ರಿಂದ ನವೆಂಬರ್ 2001ರ ಅಂತ್ಯದವರೆಗೆ ಎಷ್ಟು ಒಳ